# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 395 |
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆ ಮಾಂಜ್ರಾ ನದಿಗೆ ಚಂದಾಪುರ ಬಳಿ ನಿರ್ಮಿಸಿರುವ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣವಾಗಿ 10 ವರ್ಷ ಕಳೆದರೂ ಇಲ್ಲಿಯವರೆಗೂ ನೀರು ಶೇಖರಣೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯಲ್ಲಿ ಮಾಂಜ್ರಾ ನದಿಗೆ ಚಂದಾಪೂರ ಬ್ರಿಡ್ಜ್ ಕಂ ಬ್ಯಾರೇಜನ್ನು ರೂ.59.44 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲಾಗಿದೆ.<br><br>2016ನೇ ಸಾಲಿನಲ್ಲಿ ಮಾಂಜ್ರಾ ನದಿಯಲ್ಲಿ ಉಂಟಾದ ಪ್ರವಾಹದಿಂದಾಗಿ ಹಾನಿಗೊಳಗಾಗಿದ್ದ ಗೇಟುಗಳನ್ನು ಮೂಲ ಗುತ್ತಿಗೆದಾರರಿಂದ ಹೆಚ್ಚಿನ ಆರ್ಥಿಕ ಹೊರೆ ಆಗದಂತೆ ದುರಸ್ತಿಗೊಳಿಸಲಾಗಿರುತ್ತದೆ.<br><br>ಪ್ರಸುತ, ಸದರಿ ಬ್ಯಾರೇಜ್‌ನ ಸ್ವಯಂಚಾಲಿತ ಗೋಡಬೋಲೆ ಗೇಟುಗಳ ನಿರ್ವಹಣೆ ಕೈಗೊಂಡು ಸೋರುವಿಕೆಯನ್ನು ಕಡಿಮೆಗೊಳಿಸಿ ನೀರಿನ ಸಂಗ್ರಹಣೆ ಮಾಡಲಾಗುತ್ತಿದೆ.<br><br>ಸದರಿ ಬ್ಯಾರೇಜನ್ನು ನೀರಾವರಿ ಮತ್ತು ಕುಡಿಯುವ ನೀರಿನ ಸಲುವಾಗಿ ರೂಪಿಸಲಾಗಿರುತ್ತದೆ. ಸದರಿ ಬ್ಯಾರೇಜ್ ನಲ್ಲಿ ಸಂಗ್ರಹವಾಗುವ ನೀರನ್ನು ಚಂದಾಪುರ , ಬಾಬಳಿ, ಮಣಿಗೆಂಪೂರ, ಗೋರನಾಳ ಮತ್ತು ಹಜನಾಳ ಗ್ರಾಮಗಳ ರೈತರು ತಮ್ಮ ಸ್ವಂತ ಪಂಪ್ ಸೆಟ್ ಮೂಲಕ ನೀರನ್ನು ಎತ್ತಿ ನೀರಾವರಿ ಕಲ್ಪಿಸಿಕೊಳ್ಳುತ್ತಿರುತ್ತಾರೆ. ಸದರಿ ಬ್ಯಾರೇಜ್ ನಿಂದ ಯಾವುದೇ ಶಾಶ್ವತ ನೀರಾವರಿ ಸೌಲಭ್ಯ ಕಲ್ಪಿಸಲಾಗಿರುವುದಿಲ್ಲ. |
| ಆ) | ಬಂದಿದ್ದಲ್ಲಿ ಇಲ್ಲಿಯವರೆಗೆ ನೀರು ಶೇಖರಣೆಯಾಗದೇ ಇರುವುದಕ್ಕೆ ಕಾರಣವೇನು; (ಮಾಹಿತಿ ನೀಡುವುದು) | |
| ಇ) | ಯಾವ ಕಾಲಮಿತಿಯೊಳಗೆ ಬ್ರಿಡ್ಜ್ ಕಂ ಬ್ಯಾರೇಜ್ ನೀರು ಸಂಗ್ರಹಣೆ ಮಾಡಿ ರೈತರಿಗೆ ಮತ್ತು ಹಳ್ಳಿಗಳಿಗೆ ನೀರು ಕಲ್ಪಿಸಿಕೊಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು. | |

ಜಸಂಇ 26 ಎಂಎಲ್ಎ 2022

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು.